**All India Radio: Bangalore**
**National Bulletin In Kannada**
**29.03.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**29.03.2025 13.10 p.m.**
**<><><><>**

ಮುಖ್ಯಾಂಶಗಳು

1. ಪರಿಸರ ಸಂರಕ್ಷಣೆಯಲ್ಲಿ ಸಾಮೂಹಿಕ ಪ್ರಯತ್ನಗಳು ಅಗತ್ಯ - ರಾಷ್ಟ್ರಪತಿ ದ್ರೌಪದಿ ಮುರ್ಮು
2. ಮ್ಯಾನ್ಮಾರ್ ಭೂಕಂಪ; ಸಾವಿನ ಸಂಖ್ಯೆ ಒಂದು ಸಾವಿರಕ್ಕೆ ಏರಿಕೆ
3. ಛತ್ತೀಸ್‌ಗಢದಲ್ಲಿ ಭದ್ರತಾ ಪಡೆಗಳ ಗುಂಡಿನ ಚಕಮಕಿ; ೧೬ ಮಂದಿ ನಕ್ಸಲರು ಹತ
4. ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟಾನ್ಸ್ - ಮುಂಬೈ ಇಂಡಿಯನ್ಸ್ ನಡುವೆ ಇಂದು ಸೆಣಸಾಟ

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ನವದೆಹಲಿಯ ವಿಜ್ಞಾನಭವನದಲ್ಲಿಂದು ರಾಷ್ಟ್ರೀಯ ಪರಿಸರ ಸಮ್ಮೇಳನ - ೨೦೨೫ಅನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪರಿಸರ ಸಂರಕ್ಷಣೆಗೆ ಸಾಮೂಹಿಕ ಪ್ರಯತ್ನಗಳು ಅತ್ಯಂತ ಅಗತ್ಯವಾಗಿದೆ ಎಂದು ಒತ್ತಿ ಹೇಳಿದರು. ಪರಿಸರ ಸಂರಕ್ಷಣೆ ಸಂಬಂಧಿತ ಪ್ರಯತ್ನಗಳಲ್ಲಿ ಜನರ ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸಬೇಕು ಎಂದು ಕರೆ ನೀಡಿದರು. ಮರ, ಗಿಡ, ನದಿ ಜಲ ಸೇರಿದಂತೆ ಪ್ರಕೃತಿಯನ್ನು ಪೂಜಿಸುವ ಮಹಾನ್ ಸಂಸ್ಕೃತಿಯನ್ನು ಭಾರತೀಯರು ಪ್ರಾಚೀನ ಕಾಲದಿಂದಲೂ ಹೊಂದಿದ್ದು, ಪರಿಸರ ಸಂರಕ್ಷಣೆಗೆ ಇಡೀ ಜಗತ್ತು ಇದರಿಂದ ಪ್ರೇರಣೆ ಪಡೆಯಬಹುದಾಗಿದೆ ಎಂದು ನುಡಿದರು. ೨೦೪೭ರ ವೇಳೆಗೆ ಭಾರತವನ್ನು ವಿಕಸಿತ ರಾಷ್ಟ್ರವನ್ನಾಗಿಸಬೇಕೆಂಬ ಪ್ರಯತ್ನಗಳು ನಡೆಯುತ್ತಿದ್ದು, ಈ ಹಿನ್ನೆಲೆಯಲ್ಲಿ ಪರಿಸರವನ್ನು ಸಂರಕ್ಷಿಸಿ ಆಧುನೀಕರಣಗೊಳ್ಳಬೇಕಿದೆ ಎಂದರು.

****ಧ್ವನಿ**** ರಾಷ್ಟ್ರಪತಿ

ಎರಡು ದಿನಗಳ ಕಾಲ ನಡೆಯಲಿರುವ ಈ ಸಮ್ಮೇಳನವನ್ನು ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ ಆಯೋಜಿಸಿದೆ. ಪರಿಸರ ಸಂರಕ್ಷಣೆ ಹಾಗೂ ಪರಿಸರದ ಕುರಿತು ಜಾಗೃತಿ, ಸಹಯೋಗ ಹಾಗೂ ಸುಸ್ಥಿರ ಸಾಮೂಹಿಕ ಧ್ಯೇಯವನ್ನು ಮುನ್ನಡೆಸುವ ನಿಟ್ಟಿನಲ್ಲಿ ಈ ಸಮ್ಮೇಳನವು ಒಂದು ಪ್ರಮುಖ

ಹೆಜ್ಜೆಯಾಗಿದೆ ಎಂದರು. ಕಾರ್ಯಕ್ರಮದಲ್ಲಿ ಕೇಂದ್ರ ಪರಿಸರ ಸಚಿವ ಭೂಪೇಂದ್ರ ಯಾದವ್ ಮಾತನಾಡಿ, ಇಂಗಾಲ ಹೊರಸೂಸುವಿಕೆಯನ್ನು ತಗ್ಗಿಸಲು ಭಾರತ ವಿಶಿಷ್ಟ ಕ್ರಮಗಳ ಬಗ್ಗೆ ಕೇಂದ್ರೀಕರಿಸಿದೆ ಎಂದು ಹೇಳಿದರು. ಜಗತ್ತಿನಲ್ಲಿಯೇ ಭಾರತ ಇಂಧನ ಉತ್ಪಾದಿಸುವ ಮೂರನೇ ಅತಿದೊಡ್ಡ ರಾಷ್ಟ್ರವಾಗಿದ್ದು, ೨೦೩೦ರ ವೇಳೆಗೆ ೫೦೦ ಗಿಗಾವ್ಯಾಟ್ ನವೀಕರಣ ಇಂಧನ ಉತ್ಪಾದಿಸುವ ಗುರಿ ಹೊಂದಿದೆ ಎಂದರು.

<><><>

ನಿನ್ನೆ ರಿಕ್ಟರ್ ಮಾಪಕದಲ್ಲಿ ೭.೭ ತೀವ್ರತೆಯ ಭೂಕಂಪದ ನಂತರ ಮ್ಯಾನ್ಮಾರ್‌ನಲ್ಲಿ ಸಾವನ್ನಪ್ಪಿದವರ ಸಂಖ್ಯೆ ಒಂದು ಸಾವಿರಕ್ಕೆ ಏರಿಕೆಯಾಗಿದೆ. ಭೂಕಂಪದಲ್ಲಿ ಒಂದು ಸಾವಿರದ ೨ ಮಂದಿ ಸಾವನ್ನಪ್ಪಿದ್ದಾರೆ, ಎರಡು ಸಾವಿರದ ೩೭೬ ಮಂದಿ ಗಾಯಗೊಂಡಿದ್ದಾರೆ. ೩೦ ಮಂದಿ ಕಾಣೆಯಾಗಿದ್ದಾರೆ ಎಂದು ಸೇನಾ ನೇತೃತ್ವದ ಮ್ಯಾನ್ಮಾರ್ ಸರ್ಕಾರ ಹೇಳಿಕೆಯಲ್ಲಿ ತಿಳಿಸಿದೆ. ವಿವರವಾದ ಅಂಕಿ-ಅಂಶಗಳನ್ನು ಇನ್ನೂ ಸಂಗ್ರಹಿಸಲಾಗುತ್ತಿದ್ದು, ಸಾವು-ನೋವುಗಳು ಹೆಚ್ಚಾಗಬಹುದು. ಹೆಚ್ಚಿನ ಸಾವು-ನೋವುಗಳು ದೇಶದ ಎರಡನೇ ಅತಿದೊಡ್ಡ ನಗರ ಮಂಡೇಲೆಯಲ್ಲಿ ಸಂಭವಿಸಿವೆ ಎಂದು ಮೂಲಗಳು ತಿಳಿಸಿವೆ. ಥೈಲ್ಯಾಂಡ್‌ನ ರಾಜಧಾನಿ ಬ್ಯಾಂಕಾಕ್‌ನಲ್ಲಿ ೬ ಜನರು ಸಾವನ್ನಪ್ಪಿದ್ದಾರೆ. ೨೬ ಮಂದಿ ಗಾಯಗೊಂಡಿದ್ದಾರೆ, ೪೭ ಮಂದಿ ನಾಪತ್ತೆಯಾಗಿದ್ದಾರೆ. ಜಗತ್ತಿನ ಹಲವಾರು ದೇಶಗಳು ಮ್ಯಾನ್ಮಾರ್‌ಗೆ ಪರಿಹಾರ ಹಾಗು ನೆರವಿನ ಸಾಮಗ್ರಿಗಳನ್ನು ರವಾನಿಸುತ್ತಿವೆ. ಭಾರತವು ಶೋಧ ಮತ್ತು ರಕ್ಷಣೆ ಹಾಗೂ ವೈದ್ಯಕೀಯ ತಂಡಗಳನ್ನು ಕಳುಹಿಸಿದೆ. ಈ ನಡುವೆ, ಭಾರತ ರವಾನಿಸಿದ್ದ ೧೫ ಟನ್ ತುರ್ತು ಮಾನವೀಯ ನೆರವು ಇಂದು ಯಾಂಗೂನ್‌ಗೆ ಆಗಮಿಸಿತು. ರಷ್ಯಾದ ತುರ್ತು ಸಚಿವಾಲಯವು ೧೨೦ ರಕ್ಷಾಣ ಕಾರ್ಯಕರ್ತರು ಹಾಗೂ ಸರಬರಾಜುಗಳನ್ನು ಹೊತ್ತ ಎರಡು ವಿಮಾನಗಳನ್ನು ರವಾನಿಸಿದೆ.

<><><>

ನಿನ್ನೆಯ ಭೂಕಂಪದಿಂದ ಸಂತ್ರಸ್ತಗೊಂಡಿರುವ ಮ್ಯಾನ್ಮಾರ್‌ಗೆ ಭಾರತ ಸುಮಾರು ೧೫ ಟನ್‌ಗಳಷ್ಟು ಪರಿಹಾರ ಸಾಮಗ್ರಿಗಳನ್ನು ರವಾನಿಸಿದೆ ಎಂದು ಮೂಲಗಳು ತಿಳಿಸಿವೆ. ಭಾರತೀಯ ವಾಯುಪಡೆಯ ಸಿ-೧೩೦-ಜೆ ವಿಮಾನವು ಹಿಂಡನ್ ವಾಯುಪಡೆ ನಿಲ್ದಾಣದಿಂದ ಪರಿಹಾರ ಸಾಮಗ್ರಿಗಳನ್ನು ಹೊತ್ತು ಮ್ಯಾನ್ಮಾರ್‌ಗೆ ಸಾಗಿಸಿತು. ಪರಿಹಾರ ಸಾಮಗ್ರಿಗಳಲ್ಲಿ ಟೆಂಟ್‌ಗಳು, ಸ್ಲೀಪಿಂಗ್ ಬ್ಯಾಗ್‌ಗಳು, ಬ್ಲಾಂಕೆಟ್‌ಗಳು, ಸಿದ್ಧಪಡಿಸಿದ ಆಹಾರ ಹಾಗೂ ಜನರೇಟರ್‌ನಂತಹ ಅಗತ್ಯ

ಸಾಮಗ್ರಿಗಳು ಒಳಗೊಂಡಿವೆ. ಹೆಚ್ಚುವರಿಯಾಗಿ ಭೂಕಂಪದಿಂದ ಬಾಧಿತಗೊಂಡವರಿಗೆ ನೆರವಾಗಲು ಪ್ಯಾರಾಸಿಟಮಲ್ ಮಾತ್ರೆಗಳು, ಆಂಟಿಬಯೋಟಿಕ್ಸ್, ಸಿರಂಜ್‌ಗಳು, ಕೈಗವಸು, ಬ್ಯಾಂಡೇಜ್‌ಗಳಂತಹ ವೈದ್ಯಕೀಯ ಸಾಮಗ್ರಿಗಳನ್ನು ರವಾನಿಸಲಾಗಿದೆ. ನಿನ್ನೆ ಮ್ಯಾನ್ಮಾರ್ ಹಾಗೂ ನೆರೆಯ ಥೈಲ್ಯಾಂಡ್‌ನಲ್ಲಿ ಸಂಭವಿಸಿದ ಪ್ರಬಲ ಭೂಕಂಪನಗಳಿಂದಾಗಿ ಕಟ್ಟಡಗಳು, ಸೇತುವೆಗಳು ಹಾಗೂ ಒಂದು ಮಠ ಹಾನಿಗೀಡಾಗಿದೆ. ಮ್ಯಾನ್ಮಾರ್‌ನಲ್ಲಿ ಕನಿಷ್ಠ ೧೪೪ ಮಂದಿ ಸಾವನ್ನಪ್ಪಿದ್ದು, ನಿರ್ಮಾಣ ಹಂತದಲ್ಲಿದ್ದ ಬಹುಮಹಡಿ ಕಟ್ಟಡ ಕುಸಿದು, ಥೈಲ್ಯಾಂಡ್ ರಾಜಧಾನಿ ಬ್ಯಾಂಕಾಕ್‌ನಲ್ಲಿ ಕನಿಷ್ಠ ೧೦ ಮಂದಿ ಮೃತಪಟ್ಟಿದ್ದಾರೆ. ನಿನ್ನೆ ಮ್ಯಾನ್ಮಾರ್ ಹಾಗೂ ಥೈಲ್ಯಾಂಡ್‌ನಲ್ಲಿ ಸಂಭವಿಸಿದ ಭೂಕಂಪದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಕಳವಳ ವ್ಯಕ್ತಪಡಿಸಿದ್ದರು. ಎರಡೂ ದೇಶಗಳ ನಾಗರಿಕರ ಸುರಕ್ಷತೆ ಹಾಗೂ ಯೋಗಕ್ಷೇಮಕ್ಕಾಗಿ ಪ್ರಾರ್ಥಿಸಿದ್ದರು. ಭಾರತವು ಸಾಧ್ಯವಿರುವ ಎಲ್ಲಾ ಸಹಾಯವನ್ನು ನೀಡಲು ಸಿದ್ಧವಿದೆ. ಮ್ಯಾನ್ಮಾರ್, ಥೈಲ್ಯಾಂಡ್ ಸರ್ಕಾರದೊಂದಿಗೆ ಸಂಪರ್ಕದಲ್ಲಿರಲು ವಿದೇಶಾಂಗ ಸಚಿವಾಲಯಕ್ಕೆ ಸೂಚನೆ ನೀಡಿದ್ದರು. ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಮಾಧ್ಯಮಗೋಷ್ಠಿಯಲ್ಲಿ ಭೂಕಂಪಗಳ ಬಗ್ಗೆ ಪ್ರತಿಕ್ರಿಯಿಸಿ, ಮ್ಯಾನ್ಮಾರ್ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ನೆರವು ಹಾಗೂ ಪರಿಹಾರ ಸಾಮಗ್ರಿಗಳ ವಿಷಯದಲ್ಲಿ ಅವಶ್ಯಕತೆಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಇಂತಹ ನೈಸರ್ಗಿಕ ವಿಕೋಪಗಳು ಸಂಭವಿಸಿದಾಗಲೆಲ್ಲಾ ಭಾರತವು ನೆರೆಹೊರೆ ದೇಶಗಳಿಗೆ ಸದಾ ಮೊದಲ ಪ್ರತಿಕ್ರಿಯೆ ನೀಡುತ್ತದೆ ಎಂದು ಅವರು ಹೇಳಿದರು. ಈ ನಡುವೆ ವಿಶ್ವಸಂಸ್ಥೆಯ ಮಹಾ ಪ್ರಧಾನ ಕಾರ್ಯದರ್ಶಿ ಗುಟೆರೆಸ್ ಅವರ ವಕ್ತಾರ ಸ್ಟೀಫನ್ ಡುಜಾರಿಕ್, 'ಭೂಕಂಪದ ನಂತರದ ಕಾರ್ಯಾಚರಣೆಗಳಿಗೆ ಬೆಂಬಲವಾಗಿ ಜೀವ ಉಳಿಸುವ ನಿಟ್ಟಿನಲ್ಲಿ ತುರ್ತು ಪರಿಹಾರ ಸಂಯೋಜಕ ಟಾಮ್ ಫ್ಲೆಚರ್ ಅವರು ಯುಎನ್ ಕೇಂದ್ರ ತುರ್ತು ಪ್ರತಿಕ್ರಿಯೆ ನಿಧಿಯಿಂದ ೫ ಮಿಲಿಯನ್ ಡಾಲರ್ ಆರಂಭಿಕವಾಗಿ ನೀಡಲಾಗಿದೆ ಎಂದು ಹೇಳಿದ್ದಾರೆ.

<><><><>

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಇಂದು ಬೆಳಗ್ಗೆ ನಡೆದ ಗುಂಡಿನ ಚಕಮಕಿಯಲ್ಲಿ ಕನಿಷ್ಠ ೧೬ ಮಂದಿ ನಕ್ಸಲರು ಸಾವನ್ನಪ್ಪಿದ್ದು, ಇಬ್ಬರು ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕೆರ್ಲಾಪಾಲ್ ಪೊಲೀಸ್ ಠಾಣೆ ಪ್ರದೇಶದ ಅರಣ್ಯ ಪ್ರದೇಶದಲ್ಲಿ ನಕ್ಸಲರು ಅಡಗಿದ್ದಾರೆ

ಎಂಬ ಖಚಿತ ಮಾಹಿತಿ ಅನುಸರಿಸಿ ಜಿಲ್ಲಾ ಮೀಸಲು ಪೊಲೀಸ್ ಪಡೆ ಹಾಗೂ ಕೇಂದ್ರ ಮೀಸಲು ಪೊಲೀಸ್ ಪಡೆ ಜಂಟಿ ಕಾರ್ಯಾಚರಣೆ ನಡೆಸಿದಾಗ ಈ ಗುಂಡಿನ ಚಕಮಕಿ ನಡೆದಿದೆ. ಬೆಳಗ್ಗೆಯಿಂದ ಭದ್ರತಾ ಪಡೆಗಳು ಮತ್ತು ನಕ್ಸಲರ ನಡುವೆ ನಿರಂತರ ಗುಂಡಿನ ಚಕಮಕಿ ನಡೆಯುತ್ತಿದೆ. ಎನ್‌ಕೌಂಟರ್ ಸ್ಥಳದಿಂದ ಈವರೆಗೆ ೧೮ ನಕ್ಸಲರ ಮೃತದೇಹಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಲ್ಲದೆ ಎಕೆ-೪೭, ಸೆಲ್ಫ್ ಲೋಡಿಂಗ್ ರೈಫಲ್, ರಾಕೆಟ್ ಲಾಂಚರ್ ರೈಫಲ್‌ಗಳೂ ಸೇರಿದಂತೆ ದೊಡ್ಡ ಪ್ರಮಾಣದ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸ್ಥಳದಲ್ಲಿ ಇನ್ನೂ ಕಾರ್ಯಾಚರಣೆ ಮುಂದುವರಿದಿದೆ. ಗುಂಡಿನ ಚಕಮಕಿಯಲ್ಲಿ ಇಬ್ಬರು ಭದ್ರತಾ ಸಿಬ್ಬಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಅವರು ಹೇಳಿದ್ದಾರೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರವಾಗಲಿದೆ.

<><><>

ಅಹಮದಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡ ಸೆಣೆಸಲಿವೆ. ಪಂದ್ಯ ಇಂದು ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಎರಡೂ ತಂಡಗಳು ತಮ್ಮ ಆರಂಭಿಕ ಪಂದ್ಯಗಳಲ್ಲಿ ಪರಾಭವಗೊಂಡ ನಂತರ ಮತ್ತೆ ಪುಟಿದೇಳಲು ಎದುರು ನೋಡುತ್ತಿವೆ. ನಿನ್ನೆ ನಡೆದ ಐಪಿಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ

ಭರ್ಜರಿ ಜಯಗಳಿಸಿದೆ. ಚೆನ್ನೈನ ಚಿದಂಬರಂ ಕ್ರೀಡಾಂಗಣದಲ್ಲಿ ನಡೆದ ಪಂದ್ಯಾವಳಿಯಲ್ಲಿ ಆರ್‌ಸಿಬಿ ಒಡ್ಡಿದ ೧೯೭ ರನ್‌ಗಳನ್ನು ಬೆನ್ನುಹತ್ತಿದ ಚೆನ್ನೈ ಸೂಪರ್ ಕಿಂಗ್ಸ್, ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೪೬ ರನ್‌ಗಳನ್ನು ಮಾತ್ರ ಕಲೆಹಾಕಿತು. ಆರ್‌ಸಿಬಿಯ ರಜತ್ ಪಟಿದಾರ್ ೩೨ ಬಾಲ್‌ಗಳಿಗೆ ೫೧ ರನ್‌ಗಳನ್ನು ಗಳಿಸುವ ಮೂಲಕ ಪಂದ್ಯದ ನಿರ್ಣಾಯಕ ಆಟಗಾರಾದರು. ಇನ್ನೂ ಸಿಎಸ್‌ಕೆ ಆಟಗಾರ ರಚಿನ್ ರವೀಂದ್ರ ೪೧ ರನ್‌ಗಳನ್ನು ಗಳಿಸುವ ಮೂಲಕ ತಂಡದಲ್ಲಿ ಹೆಚ್ಚಿನ ರನ್‌ಗಳಿಸಿದ ಸಾಲಿನಲ್ಲಿ ಮೊದಲಿಗರಾದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>